ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**

**ಗುರುವಾರ, ದಿನಾಂಕ: ೧೨ನೇ ಫೆಬ್ರವರಿ, ೨೦೧೫**

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

## ಬಳ್ಳಾರಿ ನಗರದ ದುರ್ಗಮ್ಮ ದೇವಸ್ಥಾನದ ಯಾತ್ರಿನಿವಾಸ ಕಾಮಗಾರಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೬ (೧೦೦೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ದುರ್ಗಮ್ಮ ದೇವಸ್ಥಾನದ ಯಾತ್ರಿನಿವಾಸ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು ; ಹಾಲಿ ಈ ಕಾಮಗಾರಿ ಯಾವ ಹಂತದಲ್ಲಿದೆ ;

(ಇ) ಈ ಕಾಮಗಾರಿ ಈಗ ನೆನೆಗುದಿಗೆ ಬಿದ್ದಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಈ) ಈ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ಕೊಲೆಗಳನ್ನು ಭೇದಿಸಲು ವಿಫಲತೆ

**ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೭ (೧೦೦೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ನಗರದ ವಿದ್ಯಾರ್ಥಿನಿ ಕುಮಾರಿ ಸೌಮ್ಯ ಪ್ರಮೋದ ಕುಡ್ತಲಕರ ಇವಳ ಸಾವು ಕಾರವಾರದ ಜನತೆಗೆ ಅದರಲ್ಲೂ ಹೆಣ್ಣು ಮಕ್ಕಳನ್ನು ಭಯಭೀತರನ್ನಾಗಿಸಿದೆ. ಈ ಘಟನೆ ನಡೆದು ಎರಡೂವರೆ ತಿಂಗಳು ಗತಿಸಿದರೂ, ಸಾವಿಗೆ ಕಾರಣರಾದವರನ್ನು ಪತ್ತೆ ಹಚ್ಚಲು ಪೊಲೀಸ್ ಇಲಾಖೆ ವಿಫಲವಾಗಿರುವುದರ ವಿರುದ್ಧ ಅಲ್ಲಿಯ ಸಾರ್ವಜನಿಕರು ಬಹುದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಈ ರೀತಿಯ ಘಟನೆಗಳು ಆಗಿಂದಾಗ್ಗೆ ನಡೆಯುತ್ತಿದ್ದರೂ, ಪೊಲೀಸ್ ಇಲಾಖೆ ಅಪರಾಧಿಗಳನ್ನು ಪತ್ತೆ ಹಚ್ಚಲು ನಿಷ್ಕ್ರಿಯವಾಗಿರುವುದಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ಈ ಕೊಲೆ ಪ್ರಕರಣದ ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸಲು ಇಲಾಖೆಗೆ ಇನ್ನೆಷ್ಟು ಕಾಲಾವಕಾಶ ಬೇಕಾಗಿರುತ್ತದೆ ; ಇದಕ್ಕೆ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ನಿಷ್ಕಾಳಜಿ ಕಾರಣವೇ ? (ವಿವರ ನೀಡುವುದು)

## ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ನಿಗದಿಪಡಿಸಿದ ಅಂದಾಜು ವೆಚ್ಚ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೮ (೧೦೫೫) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ನಿಗದಿಪಡಿಸಿದ ಅಂದಾಜು ವೆಚ್ಚ ಎಷ್ಟು ; ಮತ್ತು ಖರ್ಚಾಗಿರುವ ಹಣ ಎಷ್ಟು ; (ವಿವರ ಒದಗಿಸುವುದು)

(ಆ) ಈ ಹಣದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಮಹಾನಗರ ಪಾಲಿಕೆಗಳಲ್ಲಿ ಶೇ. ೨೨. ೭೫ ಹಣವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳಿಗೆ ಮೀಸಲಿಡಲಾಗಿದೆಯೇ ; ಈ ಮೊತ್ತದಲ್ಲಿ ಎಷ್ಟೆಷ್ಟು ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ?

## ಮಂಡ್ಯ ನಗರದ ಶ್ರೀ ಲಕ್ಷ್ಮೀಜನಾರ್ಧನಸ್ವಾಮಿ ದೇವಸ್ಥಾನದ ಮಳಿಗೆಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೦೯ (೧೦೧೩) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ನಗರದಲ್ಲಿರುವ ಶ್ರೀ ಲಕ್ಷ್ಮೀಜನಾರ್ಧನಸ್ವಾಮಿ ದೇವಸ್ಥಾನಕ್ಕೆ ಸೇರಿದ, ಮಂಡ್ಯ ಸ.ನಂ: ೧೮೪ರಲ್ಲಿ ೩–೩೪ ಎಕರೆ ಪ್ರದೇಶದಲ್ಲಿ ಅಂಗಡಿ ಮಳಿಗೆಗಳನ್ನು ನಿರ್ಮಿಸಿಕೊಂಡು, ವ್ಯಾಪಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರದೇಶದಲ್ಲಿ ಹಾಲಿ ಇರುವ ಕಟ್ಟಡಗಳನ್ನು ರಾಜ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಗಿದೆಯೇ ;

(ಇ) ಸದರಿ ದೇವಸ್ಥಾನದ ಆವರಣದಲ್ಲಿರುವ ಹಳೆಯ ಕಟ್ಟಡಗಳನ್ನು ನೆಲಸಮಗೊಳಿಸಿ, ಆ ಜಾಗದಲ್ಲಿ ಮುಜರಾಯಿ ಇಲಾಖೆಯಿಂದ ಬೃಹತ್ ವಾಣಿಜ್ಯ ವ್ಯಾಪಾರ ಮಳಿಗೆಗಳು ಮತ್ತು ಸಾರ್ವಜನಿಕ ಸರ್ಕಾರಿ ಕಛೇರಿ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು ;

(ಉ) ಹಾಗಿಲ್ಲದಿದ್ದಲ್ಲಿ, ಹಾಲಿ ಇರುವ ಅಂಗಡಿ ಮಳಿಗೆಗಳಲ್ಲಿ ಸ್ವಾಧೀನದಲ್ಲಿರುವವರಿಗೆ ವಹಿಸಿಕೊಡಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಕಲ್ಬುರ್ಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೦ (೧೦೧೪) ನಗರಾಭಿವೃದ್ಧಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಲ್ಬುರ್ಗಿ ಮತ್ತು ಯಾದಗಿರಿ ಜಿಲ್ಲೆಯ ಮಹಾನಗರ ಪಾಲಿಕೆ, ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳು ಯಾರು ಯಾರು ? (ಇವರ ಹೆಸರಿನೊಂದಿಗೆ ವಿಳಾಸ, ವಿದ್ಯಾರ್ಹತೆ ಹಾಗೂ ಸೇವೆಗೆ ಸೇರಿದ ದಿನಾಂಕದ ಮಾಹಿತಿ ನೀಡುವುದು)

## ಅರ್ಕಾವತಿ ಬಡಾವಣೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೧ (೧೦೨೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರ್ಕಾವತಿ ಬಡಾವಣೆ ನಿರ್ಮಿಸಲು ಕಳೆದ ೧೨ ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಭೂ ಸ್ವಾಧೀನಪಡಿಸಿಕೊಂಡ ಜಮೀನಿನ ವಿಸ್ತೀರ್ಣ ಎಷ್ಟು ; (ಸರ್ವೆ ಸಂಖ್ಯೆ ಸಮೇತ ಸಂಪೂರ್ಣ ವಿವರ ನೀಡುವುದು)

(ಆ) ಜಮೀನುಗಳ ಸ್ವಾಧೀನದ ಪ್ರಾರಂಭಿಕ ಅಧಿಸೂಚನೆಯ ನಂತರ ಈವರೆವಿಗೆ ಕೈಬಿಡಲಾದ ಜಮೀನಿನ ವಿಸ್ತೀರ್ಣವೆಷ್ಟು ; (ಸರ್ವೆ ಸಂಖ್ಯೆ ಹಾಗೂ ಕೈಬಿಡಲಾದ ಅಧಿಸೂಚನೆ ಸಂಖ್ಯೆ ದಿನಾಂಕದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಜಮೀನು ಸ್ವಾಧೀನಪಡಿಸಿಕೊಂಡ ನಂತರ ಅದನ್ನು ಕೈಬಿಡುವುದಕ್ಕೆ ಸಂಬಂಧಿಸಿದಂತೆ ಸರ್ಕಾರವು ಮಾರ್ಗಸೂಚಿ ಏನಾದರೂ ರೂಪಿಸಿದೆಯೇ ; ರೂಪಿಸಿದ್ದರೆ, ಅದರ ಪ್ರತಿ ನೀಡುವುದು ?

## ಬೆಳಗಾವಿಯಲ್ಲಿ ಕೆ.ಎ.ಟಿ. ಸ್ಥಾಪನೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೧೨ (೧೧೧೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯಲ್ಲಿ ಕೆ.ಎ.ಟಿ. ಸ್ಥಾಪನೆ ಮಾಡಲು ಸರ್ಕಾರವು ಕೈಗೊಂಡ ತೀರ್ಮಾನದಂತೆ ರಾಜ್ಯ ಸರ್ಕಾರದಿಂದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆಯೇ ;

(ಆ) ಪ್ರಸ್ತಾವನೆಯನ್ನು ಯಾವಾಗ ಕಳುಹಿಸಲಾಯಿತು ; ಹಾಗೂ ಈಗ ಅದು ಯಾವ ಹಂತದಲ್ಲಿ ಇದೆ ;

(ಇ) ಕೆ.ಎ.ಟಿ.ಯನ್ನು ಬೆಳಗಾವಿಯಲ್ಲಿ ಸ್ಥಾಪಿಸಲು ಮಹತ್ವವನ್ನು ತಿಳಿಸಿ, ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಕೂಡಲೇ ಕೆ.ಎ.ಟಿ. ಯನ್ನು ಸ್ಥಾಪಿಸಲು ಒಪ್ಪಿಗೆ ಪಡೆಯಲು ಕ್ರಮ ಕೈಗೊಳ್ಳಲಾಗುವುದೇ ?

## ಬೆಂಗಳೂರು ನಗರದ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿನ ಕಟ್ಟಡಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೩ (೧೦೩೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೪ ವರ್ಷಗಳ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಮನೆ, ಅಪಾರ್ಟ್‌ಮೆಂಟ್‌ಗಳೂ ಸೇರಿದಂತೆ ಕಟ್ಟಡಗಳ ಸಂಖ್ಯೆಯ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ವಿಧಾನ ಸಭಾ ಕ್ಷೇತ್ರವಾರು ಪ್ರತ್ಯೇಕ ವಿವರ ಒದಗಿಸುವುದು ;

(ಆ) ಈ ಅವಧಿಯಲ್ಲಿ ಎಷ್ಟು ಕಟ್ಟಡಗಳ ನಿರ್ಮಾಣಕ್ಕಾಗಿ, ನಿರ್ಮಾಣ ಪ್ರಾರಂಭ (ಸಿ.ಸಿ) ಮತ್ತು ಸ್ವಾಧೀನಾನುಭವ ಪ್ರಮಾಣ ಪತ್ರ (ಓ.ಸಿ.) ವನ್ನು ನೀಡಲಾಗಿದೆ ; (ಪ್ರತ್ಯೇಕವಾರು ವಿವರ ಒದಗಿಸುವುದು)

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿನ ನಗರ ಯೋಜನೆ ವಿಭಾಗದಲ್ಲಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇವರಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; ಹಾಗಿದ್ದಲ್ಲಿ, ಇವರುಗಳ ಹೆಸರು, ಮಾತೃ ಇಲಾಖೆ, ವಿದ್ಯಾರ್ಹತೆ, ನಿಯೋಜನೆ ಅವಧಿ ಕುರಿತಾಗಿ ಮಾಹಿತಿ ಒದಗಿಸುವುದು ;

(ಈ) ಬೃಹತ್ ಪ್ರಮಾಣದಲ್ಲಿ ನಕಲಿ ಸಿ.ಸಿ. ಮತ್ತು ಓ.ಸಿ.ಗಳನ್ನು ನೀಡಲಾಗಿದ್ದು, ಇವುಗಳಿಂದ ಸರ್ಕಾರಕ್ಕೆ ಭಾರಿ ಆದಾಯ ನಷ್ಟವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣವಾದ ಅಂಶಗಳು, ವ್ಯಕ್ತಿಗಳ ಕುರಿತಾಗಿ ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ? (ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಕುರಿತು ಮಾಹಿತಿ ಒದಗಿಸುವುದು)

## ಬೆಂಗಳೂರು ನಗರದ ರಸ್ತೆ, ಪಾದಚಾರಿ ಮಾರ್ಗಗಳ ಒತ್ತುವರಿ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೪ (೧೦೦೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಾಹನ ಸಂಚಾರ ರಸ್ತೆಗಳು ಮತ್ತು ಪಾದಚಾರಿ ಮಾರ್ಗಗಳು ಒತ್ತುವರಿ/ ಅತಿಕ್ರಮಣವಾಗಿರುವ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ನಗರದ ಯಾವ ರಸ್ತೆಗಳನ್ನು ಈ ನಿಟ್ಟಿನಲ್ಲಿ ಗುರುತಿಸಲಾಗಿದೆ ; (ರಸ್ತೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಪಾದಚಾರಿ ಮಾರ್ಗಗಳು ವ್ಯಾಪಾರಿಗಳು ಸೇರಿದಂತೆ ಇತರರಿಂದ ಒತ್ತುವರಿಯಾಗಿದ್ದು, ಪಾದಚಾರಿಗಳು ರಸ್ತೆಯಲ್ಲೇ ಸಂಚರಿಸುವಂತಹ ಪರಿಸ್ಥಿತಿಯಿಂದಾಗಿ ಉದ್ಭವಿಸಿರುವ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ

ಸರ್ಕಾರವು ಗಂಭೀರವಾಗಿ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಪರಿಹಾರ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ;

(ಇ) ಒತ್ತುವರಿಯಾಗಿರುವ ಪಾದಚಾರಿ ಮಾರ್ಗಗಳು, ಕಿರಿದಾಗಿರುವ ರಸ್ತೆಗಳು ಮತ್ತು ವಾಹನಗಳ ದಟ್ಟಣೆಯಿಂದ ಆಗುತ್ತಿರುವ ಅಪಘಾತ, ತೊಂದರೆಯನ್ನು ತಪ್ಪಿಸುವ ನಿಟ್ಟಿನಲ್ಲಿ ಒತ್ತುವರಿ ತೆರವುಗೊಳಿಸಿ, ಸುಗಮ ವಾಹನ ಸಂಚಾರ, ಸುರಕ್ಷಿತ ಪಾದಚಾರಿ ಮಾರ್ಗಗಳನ್ನು ನಿರ್ಮಿಸುವ ನಿಟ್ಟಿನಲ್ಲಿ ಸರ್ಕಾರವು ತುರ್ತು ಕ್ರಮ ಕೈಗೊಳ್ಳುವ ಬಗ್ಗೆ ಗಂಭೀರವಾಗಿ ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ?

## ಬಾಂಗ್ಲಾ ನುಸುಳುಕೋರರು ಮತ್ತು ಬೊಡೊ ಉಗ್ರರು ಅವಳಿ ನಗರಗಳಲ್ಲಿ ವಾಸಿಸುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೧೫ (೧೦೪೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹುಬ್ಬಳ್ಳಿ–ಧಾರವಾಡ ಅವಳಿ ಮಹಾನಗರಗಳಲ್ಲಿ ಅಕ್ರಮವಾಗಿ ಬಾಂಗ್ಲಾ ನುಸುಳುಕೋರರು ಮತ್ತು ಬೊಡೊ ಉಗ್ರರು ವಾಸಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ಈ ಕುರಿತಂತೆ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ;

(ಇ) ದಿನೇ ದಿನೇ ಬಾಂಗ್ಲಾ ದೇಶಿಯರ ಸಂಖ್ಯೆ ಹೆಚ್ಚುತ್ತಿರುವುದರಿಂದ ಮುಂದಿನ ದಿನಗಳಲ್ಲಿ ಸಾಮಾಜಿಕ ವ್ಯವಸ್ಥೆಯ ಮೇಲೆ ಬೀರಬಹುದಾದ ದುಷ್ಪರಿಣಾಮ ಕುರಿತು ಸರ್ಕಾರವು ಗಂಭೀರವಾಗಿ ಚಿಂತಿಸಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ;

ಈ) ಅಕ್ರಮ ವಲಸಿಗರನ್ನು ರಾಜ್ಯದಿಂದ ತೆರವುಗೊಳಿಸುವ ವಿಚಾರವಾಗಿ ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಈ ನಿಟ್ಟಿನಲ್ಲಿ ಇದುವರೆಗಿನ ಪ್ರಗತಿ ಕುರಿತಾಗಿ ಮಾಹಿತಿ ಒದಗಿಸುವುದು ;

ಉ) ಕೆಲ ನುಸುಳುಕೋರರು ಪಡಿತರ ಚೀಟಿ, ಮತದಾರರ ಚೀಟಿ ಹಾಗೂ ಆಧಾರ್ ಕಾರ್ಡ್ ಸಹಿತ ಹೊಂದಿರುತ್ತಾರೆ ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಾದಚಾರಿಗಳ ಅನುಕೂಲಕ್ಕಾಗಿ ಸುರಂಗ ಮಾರ್ಗಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೧೬ (೧೯೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರಗಳಲ್ಲಿ ವಾಹನದ ದಟ್ಟಣೆ ಇರುವ ಎಷ್ಟು ಜಾಗಗಳಲ್ಲಿ ಪಾದಚಾರಿಗಳ ಅನುಕೂಲಕ್ಕಾಗಿ (ಅಂಡರ್ ಪಾಸ್) ಸುರಂಗ ಮಾರ್ಗವನ್ನು ನಿರ್ಮಿಸಲಾಗಿದೆ ;

(ಆ) ಅವಶ್ಯಕತೆ ಇರುವ ಎಷ್ಟು ಜಾಗಗಳಲ್ಲಿ ಪಾದಚಾರಿಗಳ ಸುರಂಗ ನಿರ್ಮಿಸಬೇಕಾಗಿರುತ್ತದೆ ;

(ಇ) ನಿರ್ಮಿಸಲಾಗಿರುವ ಅನೇಕ ಪಾದಚಾರಿಗಳ ಸುರಂಗ ಮಾರ್ಗಗಳು ಅವ್ಯವಸ್ಥೆಯಲ್ಲಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಅವುಗಳು ಯಾವುವು ಹಾಗೂ ಇವುಗಳನ್ನು ವ್ಯವಸ್ಥಿತಗೊಳಿಸಲು ಕೈಗೊಂಡಿರುವ ಕ್ರಮಗಳೇನು ?

## ಪಶು ವೈದ್ಯಕೀಯ ಆಸ್ಪತ್ರೆಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೧೭ (೧೦೭೯) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಪಶು ವೈದ್ಯಕೀಯ ಆಸ್ಪತ್ರೆಗಳಿಗೆ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ತೆರೆಯಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಪ್ರಸಕ್ತ ಸಾಲಿನಲ್ಲಾದರೂ ಗ್ರಾಮೀಣ ಪ್ರದೇಶಗಳಲ್ಲಿ ಈ ಆಸ್ಪತ್ರೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಈ) ಹಾಗಿದ್ದಲ್ಲಿ, ಈ ಹೊಸ ವೈದ್ಯಕೀಯ ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿ ನೀಡಲಿದೆಯೇ ?

**ಜಾನುವಾರುಗಳಿಗೆ ಸಂಬಂಧಿಸಿದ ಲಸಿಕೆಗಳ ವಿವರ**

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧೮ (೧೦೧೬) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ೨೦೧೨ ರಿಂದ ಇಲ್ಲಿಯವರೆಗೆ ಕಾಲುಬಾಯಿ ಜ್ವರ ಕಾಯಿಲೆಗೆ ತುತ್ತಾಗಿ ಸಾವನ್ನಪ್ಪಿದ ಜಾನುವಾರುಗಳ ಸಂಖ್ಯೆ ಎಷ್ಟು ; ಈವರೆವಿಗೂ ರಾಜ್ಯದಲ್ಲಿ ಈ ಕಾಯಿಲೆಗೆ ಎಷ್ಟು ಹಣ ಬಿಡುಗಡೆಗೊಳಿಸಲಾಗಿದೆ ; (ಜಿಲ್ಲಾವಾರು ಪೂರ್ಣ ವಿವರ ನೀಡುವುದು)

(ಆ) ರಾಜ್ಯದ ಲಸಿಕೆ ಸಂಸ್ಥೆ ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಯಿಂದ ಲಸಿಕೆ ಖರೀದಿಸಿದೆಯೇ ; ಕಳೆದ ವರ್ಷದಿಂದ ಈವರೆವಿಗೂ ಎಷ್ಟು ಬಗೆಯ ಲಸಿಕೆಗಳನ್ನು ಎಷ್ಟು ಪ್ರಮಾಣದಲ್ಲಿ ಖರೀದಿಸಿದೆ ; ಇದಕ್ಕಾಗಿ ಆ ಸಂಸ್ಥೆಗೆ ಎಷ್ಟು ಹಣ ಪಾವತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆಗೆ ಲಸಿಕೆ ತಯಾರಿಸಲು ಯಾವ ದಿನಾಂಕದಿಂದ ಪರವಾನಿಗೆ ನೀಡಿದೆ ; ಪರವಾನಿಗೆ ರದ್ದಾಗಿದ್ದರೆ, ನವೀಕರಣಕ್ಕೆ ಮಾಡಿರುವ ಪ್ರಯತ್ನಗಳೇನು ;

ಈ) ಪಶು ಆರೋಗ್ಯ ಮತ್ತು ಜೈವಿಕ ಸಂಸ್ಥೆ ೨೦೧೩–೧೪ ಮತ್ತು ೨೦೧೪–೨೦೧೫ರ ಸಾಲಿನಲ್ಲಿ ತಯಾರಿಸಿರುವ ಲಸಿಕೆಗಳು ಯಾವುವು ; ಅದರ ಪ್ರಮಾಣ ಎಷ್ಟು ; ಮಾರಾಟ ಮಾಡಿರುವುದರಿಂದ ಗಳಿಸಿದ ಆದಾಯ ಎಷ್ಟು ; ಪಶುಸಂಗೋಪನಾ ಇಲಾಖೆಯಿಂದ ಸದರಿ ಲಸಿಕೆಗಳನ್ನು ಖರೀದಿಸಲಾಗಿದೆಯೇ ; (ಲಸಿಕೆಗಳನ್ನು ವಿತರಿಸುವ ವಿವರ ನೀಡುವುದು)

ಉ) ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿಗಳ ಮೇಲೆ ಲೋಕಾಯುಕ್ತರ ತನಿಖೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಕ್ಕೆ ಮಾನ್ಯ ಲೋಕಾಯುಕ್ತರ ಶಿಫಾರಸ್ಸು ಏನು ; ತನಿಖಾ ವರದಿಯನ್ನು ಸಲ್ಲಿಸಲಾಗಿದೆಯೇ ; ಸಲ್ಲಿಸಲಾಗಿದ್ದಲ್ಲಿ, ವರದಿಯನ್ವಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಹೊರಗುತ್ತಿಗೆಯ ಮೂಲಕ ನೇಮಕಾತಿ ಮಾಡುವ ವಿಧಾನವನ್ನು ರದ್ದುಪಡಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೧೧೯ (೧೯೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಡಿಸೆಂಬರ್ ೨೦೧೪ರವರೆಗೆ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಈ ಹುದ್ದೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ನೇಮಕಾತಿ ಮಾಡುವ ಅನಿಷ್ಟ ಪದ್ಧತಿಯಿಂದ ನಿರುದ್ಯೋಗಿ ಯುವಕರ ಭವಿಷ್ಯದ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ ;

ಈ) ಹಾಗಿದ್ದಲ್ಲಿ, ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ನೇಮಿಸುವ ವ್ಯವಸ್ಥೆ ರದ್ದುಪಡಿಸಲು ಸರ್ಕಾರ ಸಕಾರಾತ್ಮಕವಾಗಿ ಚಿಂತನೆ ನಡೆಸಿದೆಯೇ ;

ಉ) ಯಾವ ದಿನಾಂಕದಿಂದ ಹೊರಗುತ್ತಿಗೆ ಪದ್ಧತಿಯನ್ನು ಸಂಪೂರ್ಣವಾಗಿ ನಿಷೇಧಿಸಲಾಗುವುದು ?

## ರಾಜ್ಯದಲ್ಲಿನ ಪೇಯಿಂಗ್ ಗೆಸ್ಟ್ (ಪಿ.ಜಿ.)ಗಳ ವಿವರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೦ (೧೦೦೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಪೇಯಿಂಗ್ ಗೆಸ್ಟ್ (ಪಿ.ಜಿ.) ನಡೆಸಲು ಅನುಮತಿ ನೀಡಲು ಅನುಸರಿಸುತ್ತಿರುವ ಮಾರ್ಗದರ್ಶಿ ಸೂತ್ರಗಳೇನು ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಎಷ್ಟು ಪಿ.ಜಿ.ಗಳು ಅನುಮತಿ ಪಡೆದುಕೊಂಡಿವೆ ; ಅನುಮತಿ ಪಡೆಯದೆ ಇರುವ ಪಿ.ಜಿ.ಗಳೆಷ್ಟು ; (ಜಿಲ್ಲಾವಾರು ಮಾಹಿತಿ)

(ಇ) ಅನಧಿಕೃತ ಪಿ.ಜಿ.ಗಳ ವಿರುದ್ಧ ಯಾವ ಕ್ರಮವನ್ನು ತೆಗೆದುಕೊಂಡಿದೆ ? (ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1048, ಪ್ರತಿಗಳು– 1076 – ಪಿ8